ದೂರವಾಣಿ: 7022254993
E-mail: regexamku@gmail.com

# ಕುವೆಂಪು ವಿಶ್ವವಿದ್ಯಾಲಯ

ಸಂಖ್ಯೆ:ಕುವಿ/ಪವಿ/ಬಿ.ಪಿ.ಇಡಿ/ 10878 /2016-17

ಕುಲಸಚಿವ(ಪರೀಕ್ಷಾಂಗ)ರವರ ಕಛೇರಿ
ಜ್ಞಾನಸಹ್ಯಾದ್ರಿ, ಶಂಕರಘಟ್ಟ-577451
ದಿನಾಂಕ: 10-03-2017 13

## ಪರೀಕ್ಷಾ ಪ್ರಕಟಣೆ

ವಿಷಯ: ಮೇ-2017ರಲ್ಲಿ ಜರುಗಲಿರುವ ಬಿ.ಪಿ.ಇಡಿ ದ್ವಿತೀಯ ಮತ್ತು ಚತುರ್ಥ ಸೆಮಿಸ್ಟರ್ ಪದವಿ ಪರೀಕ್ಷೆಗಳಿಗೆ ಅರ್ಜಿಸಲ್ಲಿಸುವ ಬಗ್ಗೆ.

*****

ಕುವೆಂಪು ವಿಶ್ವವಿದ್ಯಾನಿಲಯದ ಬಿ.ಪಿ.ಇಡಿ ಪದವಿಯ ಲಿಖಿತ ಪರೀಕ್ಷೆಗಳು ದಿನಾಂಕ: 11-05-2017ರಿಂದ ಪ್ರಾರಂಭವಾಗುತ್ತವೆ. ಪರೀಕ್ಷೆ ತೆಗೆದುಕೊಳ್ಳಲು ಅರ್ಹರಾದ ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಗಳನ್ನು ಭರ್ತಿಮಾಡಿ ನಿಗದಿತ ದಿನಾಂಕದೊಳಗೆ ಶುಲ್ಕ ಸಂದಾಯ ಮಾಡಿ ವಿಭಾಗಾಧ್ಯಕ್ಷರು/ಕಾಲೇಜಿನ ಪ್ರಾಂಶುಪಾಲರ ಮೂಲಕ ಕುಲಸಚಿವ(ಪರೀಕ್ಷಾಂಗ) ಇವರಿಗೆ ಸಲ್ಲಿಸಲು ತಿಳಿಸಲಾಗಿದೆ.

| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳು: | | |
|---|---|---|
| 1 | ದಂಡ ಶುಲ್ಕವಿಲ್ಲದೆ | ದಿನಾಂಕ: 20-03-2017 ರಿಂದ 25-03-2017 |
| 2 | ರೂ. 150/- ದಂಡ ಶುಲ್ಕಸಹಿತ | ದಿನಾಂಕ: 27-03-2017 ರಿಂದ 31-03-2017 |

| ಶುಲ್ಕದ ವಿವರಗಳು | | |
|---|---|---|
| 1. | ಪೂರ್ಣ ಪರೀಕ್ಷೆಗೆ | ರೂ. 730/- |
| 2. | ಪ್ರತಿ ಪತ್ರಿಕೆಗೆ (ಆ ಸೆಮಿಸ್ಟರ್‌ನ ಎಲ್ಲಾ ಪತ್ರಿಕೆಗಳಿಗೆ ರೂ. 730/-ಒಳಪಟ್ಟು) | ರೂ. 160/- |
| 3. | ಪ್ರಾಯೋಗಿಕ ಪರೀಕ್ಷೆಗೆ | ರೂ. 90/- |
| 4. | ಅಂಕಪಟ್ಟಿ ಶುಲ್ಕ | ರೂ. 160/- |
| 6. | ಘಟಿಕೋತ್ಸವ ಪ್ರಮಾಣ ಪತ್ರ ಶುಲ್ಕ (4ನೇ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ) | ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ 630/-<br>ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳಿಗೆ 530/- |

## ವಿದ್ಯಾರ್ಥಿಗಳಿಗೆ ಸೂಚನೆ:

1. ವಿದ್ಯಾರ್ಥಿಗಳು online ಮುಖಾಂತರ ಅರ್ಜಿ ಸಲ್ಲಿಸಲು student.logisys.net.in/kus ನಲ್ಲಿ login ಆಗಿ ನೊಂದಣಿ ಸಂಖ್ಯೆ, ನಮೂದಿಸಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿದ ನಂತರ ಶುಲ್ಕದ ವಿವರಗಳುಳ್ಳ ಅರ್ಜಿ ಮುದ್ರಿಸಿ ಯಾವುದೇ ಅಂಚೆ ಕಛೇರಿಯಲ್ಲಿ ಶುಲ್ಕ ಭರಿಸಿದ ನಂತರ ಪ್ರತಿಯನ್ನು ವಿಭಾಗ / ಕಾಲೇಜುಗಳಲ್ಲಿ ಸಲ್ಲಿಸಬೇಕು.

2. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು (ATM (Debit) Card/Credit Card/Online SBMನ Pay U Banking ಮೂಲಕ ನೇರವಾಗಿ ಹಣಪಾವತಿಸಬಹುದಾಗಿದೆ, ಅಥವಾ ಆನ್‌ಲೈನ್‌ನಲ್ಲಿ ಚಲನ್ ಮುದ್ರಿಸಿಕೊಂಡು ಅಂಚೆಕಛೇರಿ ಮುಖಾಂತರ ಪಾವತಿಸಿದ ನಂತರ ಸಂಬಂಧಿಸಿದ ಚಲನ್ ಪ್ರತಿ ಮತ್ತು ದಾಖಲಾತಿಗಳನ್ನು ವಿಭಾಗ / ಕಾಲೇಜಿಗೆ ಸಲ್ಲಿಸಬೇಕು. ನಿಗದಿಪಡಿಸಿದ ದಿನಾಂಕದ ನಂತರ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ಮಾನ್ಯಮಾಡಲಾಗುವುದಿಲ್ಲ.

ಅ. ರೂ. 2 ಲಕ್ಷ ಅಥವಾ ಇದಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ Freshers ವಿದ್ಯಾರ್ಥಿಗಳಿಗೆ ಮಾತ್ರ ನಿಯಮಾನುಸಾರ ಶುಲ್ಕ ವಿನಾಯಿತಿ ಇರುತ್ತದೆ. ಆದರೆ ಅಂತಹ ಅಭ್ಯರ್ಥಿಗಳು ಅಂಕಪಟ್ಟಿ ಶುಲ್ಕ ರೂ. 160-00ನ್ನು ಪಾವತಿಸಬೇಕು

ಆ. ರೂ. 2.00 ಲಕ್ಷಗಳ ಆದಾಯಕ್ಕಿಂತ ಮೇಲ್ಪಟ್ಟ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.

ಇ. ವಿನಾಯಿತಿ ಹೊಂದಿರುವ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಅವರುಗಳಿಗೆ ಮಂಜೂರಾಗುವ ವಿದ್ಯಾರ್ಥಿ ವೇತನದಿಂದ ಕಟಾಯಿಸಿ ಆಯಾ ವಿಭಾಗ / ಕಾಲೇಜುಗಳ ಪ್ರಾಂಶುಪಾಲರು ವಿಶ್ವವಿದ್ಯಾಲಯಕ್ಕೆ ಜಮಾ ಮಾಡಬೇಕು. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳು / ವಿದ್ಯಾರ್ಥಿ ವೇತನ ಮಂಜೂರಾಗದ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.

ಈ. ರೂ. 2.50 ಲಕ್ಷಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ **ಪ್ರವರ್ಗ-1ರ** ವಿದ್ಯಾರ್ಥಿಗಳು ಹಾಗೂ ರೂ. 1. ಲಕ್ಷಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ **2ಎ, 2ಬಿ, 3ಎ, 3ಬಿ** Freshers ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಆದರೆ, ವಿದ್ಯಾರ್ಥಿಗಳ ಅರ್ಹತೆ ಮತ್ತು ಮೆರಿಟ್ ಆಧರಿಸಿ ಸರ್ಕಾರದ ಅನುದಾನದ ಲಭ್ಯತೆಗೆ ಒಳಪಟ್ಟು ಶುಲ್ಕ ಮರುಭರಿಕೆ ಮೊತ್ತವನ್ನು ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಎನ್.ಇ.ಎಫ್.ಟಿ ವ್ಯವಸ್ಥೆ ಮೂಲಕ ಜಮಾ ಮಾಡಲಾಗುವುದೆಂದು ಸರ್ಕಾರದ ಆದೇಶ ಸಂಖ್ಯೆ: ಹಿಂವಇ 397 ಬಿಎಂಎಸ್ 2013 ಬೆಂಗಳೂರು ದಿನಾಂಕ:05-09-2013ರಲ್ಲಿ ತಿಳಿಸಿರುತ್ತಾರೆ.

3. ಪರಿಶಿಷ್ಟಜಾತಿ:ಪರಿಶಿಷ್ಟಪಂಗಡ ಹಾಗೂ ಇತರೆ ವರ್ಗಗಳ ಮರುಯತ್ನದ (Repeaters) ವಿದ್ಯಾರ್ಥಿಗಳಿಗೆ ಹಾಗೂ ದಂಡ ಶುಲ್ಕದೊಂದಿಗೆ ಪರೀಕ್ಷಾ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಯಾವುದೇ ಶುಲ್ಕ ವಿನಾಯ್ತಿ ಇರುವುದಿಲ್ಲ.

4. ಶುಲ್ಕ ವಿನಾಯಿತಿ ಬಯಸುವ ಎಲ್ಲಾ ವಿದ್ಯಾರ್ಥಿಗಳು ಸಕ್ಷಮ ಅಧಿಕಾರಿಗಳಿಂದ ಪಡೆದ ಆದಾಯ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ವಿಭಾಗ / ಕಾಲೇಜಿಗೆ ಒಪ್ಪಿಸಬೇಕು.

5. ಶೇಕಡಾ 75 ಹಾಜರಾತಿ ಕಡ್ಡಾಯ. ಯಾವ ಅಭ್ಯರ್ಥಿ ಶೇಕಡ 75 ಹಾಜರಾತಿ ಗಳಿಸಿರುವುದಿಲ್ಲವೋ ಅಂತಹ ವಿದ್ಯಾರ್ಥಿಗೆ ಪರೀಕ್ಷಾ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.

6. ಪ್ರವೇಶ ಅನುಮೋದನೆಯಾಗದಿರುವುದು, ಸರಿಯಾದ ಪರೀಕ್ಷಾ ಶುಲ್ಕ ಇತ್ಯಾದಿ ಪಾವತಿಸದಿರುವುದು, ಹಾಜರಾತಿ ಕೊರತೆ, ಪರೀಕ್ಷಾ ಅಕ್ರಮವಾಗಿರುವುದು ಇತ್ಯಾದಿ ನ್ಯೂನತೆ ಇರುವುದು ಕಂಡುಬಂದಲ್ಲಿ ಅಂತಹವರ ಫಲಿತಾಂಶ ತಡೆಹಿಡಿಯಲಾಗುವುದು.

7. ಶುಲ್ಕ ಪಾವತಿಸಲು, ಅರ್ಜಿ ಸಲ್ಲಿಸಲು, ನಿಗದಿಪಡಿಸಿರುವ ದಿನಾಂಕವನ್ನು ಯಾವುದೇ ಕಾರಣದಿಂದಲೂ ವಿಸ್ತರಿಸಲಾಗುವುದಿಲ್ಲ.

8. ಯಾವ ಅಭ್ಯರ್ಥಿ ಯಾವ ಕೇಂದ್ರದಲ್ಲಿ ಸೈದ್ಧಾಂತಿಕ ಪರೀಕ್ಷೆ ಬರೆಯಬೇಕು ಎಂಬುದನ್ನು ಪ್ರವೇಶ ಪತ್ರದಲ್ಲಿ ಮುದ್ರಿಸಲಾಗಿದೆ. ಪರೀಕ್ಷಾ ಕೇಂದ್ರ ಬದಲಿಸಲು ಅವಕಾಶವಿಲ್ಲ.

9. ಒಂದು ವೇಳೆ ಅರ್ಹ ಅಭ್ಯರ್ಥಿಗೆ ಸಂಬಂಧಿಸಿದಂತೆ ಕಂಪ್ಯೂಟರಿನಿಂದ ಪರೀಕ್ಷಾ ಅರ್ಜಿ ಮುದ್ರಿಸಿ ಕಳುಹಿಸಲಾಗದಿದ್ದಲ್ಲಿ ಆ ಅಭ್ಯರ್ಥಿ ಕಾಲೇಜಿನ/ವಿಭಾಗದಿಂದ ನಿಗದಿತ ಅರ್ಜಿ ನಮೂನೆಯನ್ನು ಪಡೆದು ಅದರಲ್ಲಿ ಅಗತ್ಯವಾದ ಎಲ್ಲ ಮಾಹಿತಿಯನ್ನು ಭರ್ತಿ ಮಾಡಿ ಕಾಲೇಜಿನ ಪ್ರಾಂಶುಪಾಲರು/ವಿಭಾಗದ ಮುಖ್ಯಸ್ಥರಿಗೆ ಸಲ್ಲಿಸಬೇಕು.

10. **ವಿದ್ಯಾರ್ಥಿಗಳು ಪರೀಕ್ಷೆಗೆ ಕಟ್ಟುವ ಶುಲ್ಕವನ್ನು ಯಾವುದೇ ಕಾರಣಕ್ಕೂ ಮರುಪಾವತಿ ಮಾಡುವುದಿಲ್ಲ.**

11. **ಈಗಾಗಲೇ ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳೂ ಕೂಡಾ ನಿಗದಿತ ಸಮಯದಲ್ಲಿ ಪರೀಕ್ಷಾ ಶುಲ್ಕ ಪಾವತಿಸಬೇಕು.**

## ವಿಭಾಗದ ಮುಖ್ಯಸ್ಥರು / ಪ್ರಾಚಾರ್ಯರಿಗೆ ಸೂಚನೆಗಳು

1. ವಿದ್ಯಾರ್ಥಿಗಳು ಪಾವತಿಸಿ ಸಲ್ಲಿಸಿದ ಚಲನ್‌ನ್ನು ಪರಿಶೀಲಿಸಿ ಕೊನೆ ದಿನಾಂಕದಿಂದ ಎರಡುದಿನದೊಳಗಾಗಿ ಪ್ರಾಂಶುಪಾಲರ ಮೇಲುಸಹಿಯೊಂದಿಗೆ ಚಲನ್ ಪ್ರತಿ ಹಾಗೂ ಇತರೆ ದಾಖಲೆಗಳೊಂದಿಗೆ ವಿಶ್ವವಿದ್ಯಾಲಯಕ್ಕೆ ಸಲ್ಲಿಸಬೇಕು.

2. ನಿಯಮಾನುಸಾರ ಅರ್ಹರಾದ ವಿದ್ಯಾರ್ಥಿಗಳಿಂದ ಮಾತ್ರ ಪರೀಕ್ಷಾ ಅರ್ಜಿ ಹಾಗೂ ಶುಲ್ಕ ಸಂಗ್ರಹಿಸಬೇಕು. ಹಾಗೂ ಒಂದು ಪ್ರತಿಯುನ್ನು ವಿಭಾಗದಲ್ಲಿ ಮಾಹಿತಿಗಾಗಿ ಸಂರಕ್ಷಿಸಿಕೊಳ್ಳುವುದು.

3. ಕುಲಸಚಿವ(ಆಡಳಿತ)/ಶೈಕ್ಷಣಿಕ ವಿಭಾಗದಿಂದ ಪ್ರವೇಶಾತಿ ಅನುಮೋದನೆಯಾಗದೆ ಹಾಗೂ ಕಡಿಮೆ ಹಾಜರಾತಿ ಇರುವ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ಅನರ್ಹರಾಗಿರುತ್ತಾರೆ. ಪ್ರವೇಶಾವಕಾಶವು ಅಮಾನ್ಯವಾಗಿರುವ ಅಥವಾ ವಿಶ್ವವಿದ್ಯಾಲಯದಿಂದ ಪ್ರವೇಶವು ಅನುಮೋದಿತವಾಗಿಲ್ಲದ ಅಥವಾ ನಿರ್ದಿಷ್ಟ ಪಡಿಸಲಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚಿಗೆಯಾಗಿ ಕಾಲೇಜಿಗೆ ಅಥವಾ ವ್ಯಾಸಂಗ ಕ್ರಮಕ್ಕೆ ಪ್ರವೇಶ ಪಡೆದಿರುವ ಯಾವೊಬ್ಬ ವಿದ್ಯಾರ್ಥಿಯೂ, ಕಾಲೇಜು ಅಥವಾ ವಿಶ್ವವಿದ್ಯಾಲಯವು ನಡೆಸುವ ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಅಲ್ಲದೆ ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸುವಂತಿಲ್ಲ.

4. ಪ್ರವೇಶಾನುಮೋದನೆಯಾಗದೆ ಹಾಗೂ ಹಾಜರಾತಿ ಕೊರತೆ ಇರುವಂತಹ ವಿದ್ಯಾರ್ಥಿಗಳ ಪಟ್ಟಿಯನ್ನು ಪರೀಕ್ಷೆಗಳು ಆರಂಭವಾಗುವ 15ದಿನ ಮುಂಚಿತವಾಗಿ ವಿಶ್ವವಿದ್ಯಾಲಯಕ್ಕೆ ತಪ್ಪದೇ ಸಲ್ಲಿಸುವುದು. ಒಂದು ವೇಳೆ ಪ್ರವೇಶಾನುಮೋದನೆಯಾಗದೇ, ಹಾಜರಾತಿ ಕೊರತೆ ಇರುವ, ಅರ್ಹತೆಯಿಲ್ಲದೆ ಇರುವ, ಮುಂದಿನ ಸೆಮಿಸ್ಟರ್‌ಗೆ ವಿಶ್ವವಿದ್ಯಾಲಯದ ನಿಯಮಾವಳಿಯಂತೆ ಅರ್ಹತೆ ಇಲ್ಲದ ವಿದ್ಯಾರ್ಥಿಗಳು ಪರೀಕ್ಷೆ ಅರ್ಜಿ ಸಲ್ಲಿಸಿದ್ದಲ್ಲಿ, ಪರೀಕ್ಷೆ ತೆಗೆದುಕೊಂಡಲ್ಲಿ ಮುಂದಿನ ಎಲ್ಲಾ ತರಹದ ತೊಂದರೆಗಳಿಗೆ ಕಾಲೇಜಿನ ಪ್ರಾಂಶುಪಾಲರೆ ನೇರ ಜವಾಬ್ದಾರಾಗಿರುತ್ತಾರೆ.

5. ರೂ. 2.5 ಲಕ್ಷ ಅಥವಾ ಇದಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ Freshers ವಿದ್ಯಾರ್ಥಿಗಳಿಗೆ ಮಾತ್ರ ನಿಯಮಾನುಸಾರ ಶುಲ್ಕ ವಿನಾಯಿತಿ ಇರುತ್ತದೆ. ಆದರೆ ಅಂತಹ ಅಭ್ಯರ್ಥಿಗಳು ಅಂಕಪಟ್ಟಿ ಶುಲ್ಕ ರೂ. 160/–ನ್ನು ಪಾವತಿಸಬೇಕು.

ಅ. ರೂ. 2.00 ಲಕ್ಷಗಳ ಆದಾಯಕ್ಕಿಂತ ಮೇಲ್ಪಟ್ಟ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.

ಆ. ವಿನಾಯಿತಿ ಹೊಂದಿರುವ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಅವರುಗಳಿಗೆ ಮಂಜೂರಾಗುವ ವಿದ್ಯಾರ್ಥಿ ವೇತನದಿಂದ ಕಟಾಯಿಸಿ ಆಯಾ ಕಾಲೇಜುಗಳ ಪ್ರಾಂಶುಪಾಲರು ವಿಶ್ವವಿದ್ಯಾಲಯದ ಶುಲ್ಕ ಮತ್ತು ಸಂಭಾವನೆ ಖಾತೆ ಸಂಖ್ಯೆ: 54023036246 ಜಮಾ ಮಾಡಬೇಕು. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳಿಂದ ಪೂರ್ಣ ಪರೀಕ್ಷಾ ಶುಲ್ಕ ವಸೂಲಿ ಮಾಡತಕ್ಕದ್ದು.

6. ಕಡೇ ದಿನಾಂಕದ ನಂತರ ಪರೀಕ್ಷಾಂಗ ವಿಭಾಗದಲ್ಲಿ ಪ್ರತಿ ವಿಭಾಗ / ಕಾಲೇಜಿನ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಪರಿಶೀಲಿಸಲಾಗುವುದು. ಶುಲ್ಕಪಾವತಿ ಸಮರ್ಪಕವಾಗಿ ಕಂಡುಬರದೇ ಇರುವ ಪಕ್ಷದಲ್ಲಿ ಆ ವಿದ್ಯಾರ್ಥಿಯ ಪರೀಕ್ಷಾ ಪ್ರವೇಶ ಪತ್ರವನ್ನು ನೀಡಲಾಗುವುದಿಲ್ಲ.

7. ಸೈದ್ಧಾಂತಿಕ ಪರೀಕ್ಷೆ ನಡೆಸಲು ಬೇಕಾದ ಉತ್ತರ ಪತ್ರಿಕೆ ಮುದ್ರಿತ ನಮೂನೆಗಳು ಹಾಗೂ ಲೇಖನ ಸಾಮಾಗ್ರಿಗಳ ಬೇಡಿಕೆ ಪಟ್ಟಿಗಳನ್ನು ದಿನಾಂಕ: 13–04–2017ರೊಳಗಾಗಿ ಶ್ರೀ. ಸಿ. ನಾಗರಾಜ, ಅಧೀಕ್ಷಕರು ಮತ್ತು ಶ್ರೀ. ರವಿ ಕೆ .ಆರ್. ವಿಷಯ ನಿರ್ವಾಹಕರು ಪರೀಕ್ಷಾ ವಿಭಾಗ ಇವರಿಗೆ ತಲುಪಿಸಲು ಸೂಚಿಸಿದೆ.

8. ಪ್ರಶ್ನೆ ಪತ್ರಿಕೆಗಳ ಬೇಡಿಕೆಯನ್ನು ದಿನಾಂಕ: 15–04–2017ರೊಳಗಾಗಿ ಡಾ.ಕೆ.ಯೋಗೇಂದ್ರ ಉಪಕುಲಸಚಿವ (ಪರೀಕ್ಷಾಂಗ) ಇವರಿಗೆ ತಲುಪಿಸಲು ಸೂಚಿಸಿದೆ.

9. ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ವಿದ್ಯಾರ್ಥಿಗಳ ಗಮನಕ್ಕೆ ತಂದು, ವಿದ್ಯಾರ್ಥಿಗಳ ಸಹಿ ಪಡೆದು, ಆನ್‌ಲೈನ್ ಮೂಲಕ ನಮೂದಿಸಿ ನಂತರ **Freeze** ಮಾಡಬೇಕು.

10. ಪ್ರಾಯೋಗಿಕ ಪರೀಕ್ಷೆಯ ಅಂಕಗಳನ್ನು ಪ್ರಾಯೋಗಿಕ ಪರೀಕ್ಷೆ ಮುಗಿದ ದಿನವೇ ಆನ್‌ಲೈನ್‌ನಲ್ಲಿ ನಮೂದಿಸಿ **Freeze** ಮಾಡಬೇಕು. ನಂತರ ನಮೂದಿಸಿರುವ ಅಂಕಗಳ ತಃಖ್ತೆಯನ್ನು ಮುದ್ರಿಸಿಕೊಂಡು ಈ ಕಛೇರಿಗೆ ಕಳುಹಿಸಿಕೊಡಬೇಕು.

11. **ಸೈದ್ಧಾಂತಿಕ ಪರೀಕ್ಷೆ ಪ್ರಾರಂಭಕ್ಕೆ ಮುಂಚೆ ಆಂತರಿಕ ಅಂಕಗಳಿಗೆ ಸಂಬಂಧಿಸಿದಂತೆ, ಯಾವುದೇ ತೊಂದರೆಗಳಿದಲ್ಲಿ ಅದನ್ನು ಬಗೆಹರಿಸಿಕೊಳ್ಳಬೇಕು. ತದನಂತರ ಬರುವಂತಹ ಆಂತರಿಕ ಅಂಕಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.**

12. ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳಿಂದ ಪರೀಕ್ಷೆಗಳಿಗೆ ಅರ್ಜಿಯನ್ನು ಸ್ವೀಕರಿಸಬಾರದು. ಅಂತಹ ವಿದ್ಯಾರ್ಥಿಗಳ ಪರೀಕ್ಷಾ ಅರ್ಜಿ ಸ್ವೀಕರಿಸಿದ್ದಲ್ಲಿ ಸಂಬಂಧಪಟ್ಟ ವಿಭಾಗದ ಅಧ್ಯಕ್ಷರು/ಕಾಲೇಜಿನ ಮುಖ್ಯಸ್ಥರು ಜವಾಬ್ದಾರರಾಗಿರುತ್ತಾರೆ ಮತ್ತು ಅಂತಹ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಪರೀಕ್ಷೆ ಕೂಡ ನಡೆಸಬಾರದು.

13. ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿರುವಂತಹ (ಕಾಲೇಜು ಮತ್ತು ವಿಶ್ವವಿದ್ಯಾಲಯವನ್ನು ಪ್ರತಿನಿಧಿಸಿ) ವಿಭಾಗ/ಕಾಲೇಜುಗಳಲ್ಲಿ ಹಾಜರಿಲ್ಲದ ವಿದ್ಯಾರ್ಥಿಗಳು ಕೂಡ ನಿಗದಿತ ಸಮಯದೊಳಗೆ ಪರೀಕ್ಷಾ ಅರ್ಜಿಯನ್ನು ಸಲ್ಲಿಸುವಂತೆ ಸಂಬಂಧಪಟ್ಟ ವಿಭಾಗದ ಅಧ್ಯಕ್ಷರು/ಕಾಲೇಜಿನ ಪ್ರಾಂಶುಪಾಲರುಗಳು ನಿಗಾವಹಿಸತಕ್ಕದ್ದು.

14. ಯಾವುದೇ ವಿದ್ಯಾರ್ಥಿಯ ಆಂತರಿಕ ಅಂಕ ಬಿಟ್ಟುಹೋದಲ್ಲಿ ಯಾವ ಕಾರಣಕ್ಕೂ ಹಾರ್ಡ್‌ಕಾಪಿಯನ್ನು ನಂತರ ವಿಭಾಗ / ಕಾಲೇಜಿನಿಂದ ಕಳುಹಿಸಿಕೊಟ್ಟಲ್ಲಿ ಅದನ್ನು ಪರಿಗಣಿಸಲಾಗುವುದಿಲ್ಲ ಅಂತಹ ಮನವಿಗಳನ್ನು ತಿರಸ್ಕರಿಸಲಾಗುವುದು.

(ಪ್ರೊ. ರಾಜಾ ನಾಯಕ)
ಕುಲಸಚಿವರು (ಪರೀಕ್ಷಾಂಗ)
ಕುವೆಂಪು ವಿಶ್ವವಿದ್ಯಾನಿಲಯ,
ಜ್ಞಾನ ಸಹ್ಯಾದ್ರಿ,
ಶಂಕರಘಟ್ಟ-577 451.

ಗೆ,

1. ಕೋ-ಆರ್ಡಿನೇಟರ್ ಸ್ನಾತಕ ದೈಹಿಕ ಶಿಕ್ಷಣ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
2. ಜನರಲ್ ಕಾರಿಯಪ್ಪ ದೈಹಿಕ ಶಿಕ್ಷಣ ಮಹಾವಿದ್ಯಾಲಯ, ಶಿವಮೊಗ್ಗ. (ಎಸ್.ಆರ್.ಎನ್.ಎಂ. ಕಾಲೇಜು ಆವರಣ)

<u>ಪ್ರತಿಗಳು:</u>

01. ಆಪ್ತಶಾಖೆ, ಮಾನ್ಯಕುಲಪತಿ, ಕುಲಸಚಿವ(ಆಡಳಿತ), ಕುಲಸಚಿವ (ಪರೀಕ್ಷಾಂಗ) ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
02. ನಿರ್ದೇಶಕರು, ಪಿ.ಎಂ.ಇ ಮಂಡಳಿ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
03. ಸರ್ಕಾರಿ ಲೆಕ್ಕಪರಿಶೋಧಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
04. ಉಪಕುಲಸಚಿವರು: ಸಹಾಯಕ ಕುಲಸಚಿವರು, ಪರೀಕ್ಷಾಂಗ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
05. ಅಧೀಕ್ಷಕರು, ಪರೀಕ್ಷಾ ವಿಭಾಗ ಹಾಗೂ ಕಂಪ್ಯೂಟರ್ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
06. ಗ್ರಂಥಪಾಲಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ - ಸದರಿ ಅಧಿಸೂಚನೆಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಕೋರಲಾಗಿದೆ.
07. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
08. ನಿರ್ದೇಶಕರು, UCCF ಕಛೇರಿ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
09. ಎಲ್ಲಾ ವಿಷಯ ನಿರ್ವಾಹಕರು, ಪರೀಕ್ಷಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
10. ಕಛೇರಿ ಪ್ರತಿ.